ಕಥೆ

ಪ್ರಜ್ಞಾ ಮತ್ತೀಹಳ್ಳಿ
ಕಲೆ: ಎಸ್.ವಿ. ಹೂಗಾರ್

ಬಣ್ಣದ ವೇಷ

ನೀಲಕಮಲವೆಂದು ಚೆಂದನೆಯ ಸ್ಟಿಕ್ಕರ್ ಅಂಟಿಸಿಕೊಂಡು ಫಳಫಳ ಹೊಳೆಯುತ್ತಿದ್ದ ಸ್ಟೀಲು ತಾಟು ಢಮಾರ್ ಎಂಬ ದೊಡ್ಡ ಸಪ್ಪಳದೊಂದಿಗೆ ಗೋಡೆಗೆ ಮುಖ ಗುದ್ದಿಕೊಂಡು ನೆಲಕಪ್ಪಳಿಸುವುದು, ಅದೇ ಗೋಡೆಯ ಮೇಲೆ ನೇತಾಡುವ ಬಂಗಾರ ಬಣ್ಣದ ಗುಂಡು ಮೋರೆಯ ಗಡಿಯಾರ ಢಣ್ ಢಣ್ ಎಂದು ಒಂಬತ್ತು ಸಲ ಹೊಡೆದುಕೊಳ್ಳುವುದೂ ಏಕಕಾಲದಲ್ಲಿಯೇ ಘಟಿಸುವ ಮೂಲಕ ತಗ್ಗಿನಕೇರಿಯೆನ್ನುವ ಊರಿನಲ್ಲೇ ಹೆಚ್ಚು ತಗ್ಗಾಗಿರುವ ಆ ಕೇರಿಯಲ್ಲೊಂದು ಯುದ್ಧ ಘೋಷಣೆಯಾಗಿತ್ತು.

ದುರವೀಳ್ಯವನ್ನು ತನ್ನ ಕುದಿಯುವ ಮನಸ್ಸಿನಲ್ಲಿಯೇ ತಯಾರಿಸಿಕೊಂಡ ನಾಗಲಕ್ಷ್ಮಿ ಹೆಡೆಯಾಡಿಸುವ ಘಟಸರ್ಪದಂತೆ ಧುಸ್ ಧುಸ್ ಉಸಿರುಬಿಟ್ಟಳು. ಆದರೆ, ರಣವೀಳ್ಯವನ್ನು ಇಸಿದುಕೊಳ್ಳಬೇಕಾಗಿದ್ದ ಆಕೆಯ ಎದುರು ಪಕ್ಷದ ಸೇನಾನಿ ಪದುಮಣ್ಣ ಅಂದರೆ ಆಕೆಯ ಗಂಡ ಆಸುಪಾಸಿನಲ್ಲೆಲ್ಲೂ ಇಲ್ಲದಿದ್ದ ಕಾರಣ ಬೋರಲು ಬಿದ್ದ ತಾಟಿನಿಂದ ಹೊರಬಿದ್ದು ಚೆಲ್ಲಾಪಿಲ್ಲಿಯಾದ ಅನ್ನದಗುಳಿನಷ್ಟೇ ಅನಾಥಳು ತಾನೆಂಬ ಭಾವ ಮೂಡಿದ್ದೇ ತಡ, ಅಳುಮಿಶ್ರಿತ ಕ್ರೋಧದ ಅಲೆಯೊಂದು ಅವಳ ನಾಭಿಯಾಳದಿಂದ ಹೊರಟು ಗಂಟಲಿನವರೆಗೆ ಬಂದಿತು. ಆಗ ಅವಳ ಧುಸ್ ಧುಸ್ ಸದ್ದು ಕೆಲವು ಬಿಕ್ಕುಗಳನ್ನು ಸೇರಿಸಿಕೊಂಡು ಹುಂ ಕ್ಕು ಕ್ಕು ಹುಂ ಕ್ಕು ಕ್ಕು ಎಂಬಂತಹ ವಿಚಿತ್ರ ಸಪ್ಪಳವಾಗಿ ಪರಿವರ್ತನೆ ಹೊಂದಿತು. ಅವಳ ಕೈಯಿಂದ ಬೀಸಿ ಒಗೆಯಲ್ಪಡುವ ಮೊದಲು ಪುಟ್ಟ ಪುಟ್ಟ ತುತ್ತುಗಳು ತುಂಬಿದ್ದ ತಾಟನ್ನು ಆವರೆಗೆ ಹೊತ್ತುಕೊಂಡಿದ್ದ ಟಿಪಾಯಿಯ ಮೇಲೆ ಕೂತಿದ್ದ ಮೊಬೈಲು ಈಗಷ್ಟೇ ಮುಗಿದ ಕರೆಯ ಸಲುವಾಗಿ ತನ್ನೊಳಗೆ ಹಚ್ಚಿಕೊಂಡಿದ್ದ ಬೆಳಕನ್ನು ಆರಿಸಿ ಕಪ್ಪಾಯಿತು.

ಎಂದೂ ಯಾವ ಕಾರಣಕ್ಕೂ ಅಳು ಎಂಬ ಕ್ರಿಯೆಯನ್ನೇ ಇಷ್ಟ ಪಡದ, ಅಳುವವರ ಸಮೀಪಕ್ಕೆ ಹೋಗಲಿಕ್ಕೂ ಇಚ್ಛೆಪಡದ, ತಾನೆಂಬೋ ತಾನು ತನ್ನ ಮನೆ, ಸಂಸಾರಗಳನ್ನು ತನ್ನಿಚ್ಛೆಯಂತೆಯೇ ನಡೆಸಬಲ್ಲ ಭಯಂಕರ ತಾಕತ್ತಿನವಳೆಂದು ಬಲವಾಗಿ ನಂಬಿಕೊಂಡಿದ್ದ ನಾಗಲಕ್ಷ್ಮಿಗೆ ತನ್ನೊಳಗೆ ಉಕ್ಕುತ್ತಿರುವ ಭಾವನೆಯನ್ನು ಹೇಗೆ ನಿರ್ವಹಿಸಬೇಕೆಂದೇ ತಿಳಿಯದಂತಾಗಿ ಆವೇಶದ ನಡುಕ ಬರತೊಡಗಿತು. ತಾನೀಗ ಸೋತಿದ್ದೇನೆಂಬ ನಿರಾಶೆ, ಗೆಲ್ಲಲಾಗಲಿಲ್ಲವೆಂಬ ಹತಾಶೆ, ತನ್ನ ಸೋಲನ್ನು ತಾನೆಂದೂ ಸ್ವೀಕರಿಸಬಾರದೆಂಬ ಹಟ ಇವೆಲ್ಲ ಕೂಡಿದ ಪ್ರಳಯಾಗ್ನಿಯಂತಹ ಬೆಂಕಿಯೊಂದು ಒಡಲಲ್ಲಿ ಹುಟ್ಟಿದ್ದೇ ತಡ, ಹಲ್ಲು ಕಡಿಯುತ್ತಾ, ಚಪ್ಪಲಿ ಮೆಟ್ಟಿಕೊಂಡು ಬಾಗಿಲನ್ನು ಹಾಗೇ ಮುಂದಕ್ಕೆಳೆದುಕೊಂಡು ಹೊರಟುಬಿಟ್ಟಳು. ಕೆಂಡ ಕಾರುತ್ತಿದ್ದ ಅವಳ ಕಣ್ಣೊಳಗೆ ಗಂಡ ಪದುಮಣ್ಣನ ಚಿತ್ರ ಗಿರಿಗಿರಿ ತಿರುಗುತ್ತಿತ್ತು. ಅಲ್ಲೇ